ಶೋರಾಪುರ ತಾಲ್ಲೂಕಿನಲ್ಲಿ ಸರ್ಕಾರಿ ಪ್ರೌಢ ಶಾಲೆಯನ್ನು ಮಂಜೂರು ಮಾಡುವುದು

4560 (5290) : ಶ್ರೀ ರಾಜಾ ವೆಂಕಟಪ್ಪ ನಾಯಕ್ (ಶೋರಾಪುರ) : ಮಾನ್ಯ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಬಾಳಶೆಟ್ಟಿಹಾಳ್ ಮತ್ತು ಸುತ್ತಮುತ್ತಲು ಹಳ್ಳಿಗಳಿಗೆ ಸರ್ಕಾರಿ ಪ್ರೌಢಶಾಲೆಯ ಅವಶ್ಯಕತೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಆ) ಬಂದಿದ್ದಲ್ಲಿ ಶೋರಾಪುರ ತಾಲ್ಲೂಕಿನ ಬಾಳಶೆಟ್ಟಿಹಾಳ್ ಗ್ರಾಮಕ್ಕೆ ಯಾವಾಗ ಪ್ರೌಢಶಾಲೆಯನ್ನು ಮಂಜೂರು ಮಾಡಲಾಗುವುದು?

ಶ್ರೀ ಪ್ರೊ. ಬಿ.ಕೆ. ಚಂದ್ರಶೇಖರ್ (ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ರಾಜ್ಯ ಸಚಿವರು)

ಅ) ಪ್ರಸ್ತಾವನೆ ಬಂದಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಗುಲಬರ್ಗಾ ಜಿಲ್ಲೆಯ ಕಮಲಾಪುರ ವಿಧಾನ ಸಭಾ ಕ್ಷೇತ್ರದಲ್ಲಿ ಸ್ವಜಲಧಾರ ಯೋಜನೆ

4561 (5258) : ಶ್ರೀ ರೇವುನಾಯಕ್ ಬೆಳಮಗಿ (ಕಮಲಪೂರ್) : ಮಾನ್ಯ ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ಸ್ವಜಲಧಾರಾ ಯೋಜನೆಯನ್ನು ಗುಲ್ಬರ್ಗಾ ಜಿಲ್ಲೆಯಲ್ಲಿ ಜಾರಿಗೆ ತರಲಾಗಿದೆಯೇ;

ಆ) ಕಮಲಾಪುರ ವಿಧಾನಸಭಾ ಕ್ಷೇತ್ರದ ವ್ಯಾಪ್ತಿಯಲ್ಲಿ ಒಟ್ಟು ಎಷ್ಟು ಕಡೆ ಯೋಜನೆಯನ್ನು ಜಾರಿಗೆ ತರಲಾಗಿದೆ; ಇದಕ್ಕಾಗಿ ಸರ್ಕಾರ ಎಷ್ಟು ಹಣ ಬಿಡುಗಡೆ ಮಾಡಿದೆ;

ಇ) ಕಮಲಾಪುರ ವಿಧಾನಸಭಾ ಕ್ಷೇತ್ರದಲ್ಲಿ ಕೈಗೆತ್ತಿಕೊಂಡಿರುವ ಕಾಮಗಾರಿಗಳ ಸಂಪೂರ್ಣ ಮಾಹಿತಿ ನೀಡುವುದು?

ಶ್ರೀ ಕೆ.ಬಿ. ಕೋಳಿವಾಡ್ (ಗ್ರಾಮೀಣ ನೀರು ಸರಬರಾಜು ರಾಜ್ಯ ಸಚಿವರು)

ಅ) ಇಲ್ಲ. ಸ್ವಜಲಧಾರಾ ಯೋಜನೆಯಡಿ ಇಲ್ಲಿಯವರೆವಿಗೂ ಗುಲ್ಬರ್ಗಾ ಜಿಲ್ಲೆಯಲ್ಲಿ ಯಾವುದೇ ಯೋಜನೆಗಳನ್ನು ಮಂಜೂರು ಮಾಡಿರುವುದಿಲ್ಲ.

ಆ) ಇ) ಉದ್ಭವಿಸುವುದಿಲ್ಲ.

ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳಿಗೆ ಔಷಧಿಗಳನ್ನು ಕೊಳ್ಳುವುದು

4562 (5295) : ಶ್ರೀ ಸಭಾಪತಿ ಯು.ಆರ್. (ಉಡುಪಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ಉತ್ತರಿಸುವರೆ?

ಅ) ರಾಜ್ಯದಲ್ಲಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು ಮತ್ತು ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾದ ಔಷಧಗಳನ್ನು ಕೊಳ್ಳಲು (ಖರೀದಿಸಲು) ಆಯಾ ಜಿಲ್ಲೆಗಳ ಜಿಲ್ಲಾ ಆರೋಗ್ಯ ಕುಟುಂಬ ಕಲ್ಯಾಣ ಅಧಿಕಾರಿಗಳಿಗೆ ಅಥವಾ ಜಿಲ್ಲಾ ಸರ್ಜನ್‌ಗಳಿಗೆ ಮುಕ್ತಾವಕಾಶ ನೀಡಲು ಸಾಧ್ಯವಿಲ್ಲವೇ?

ಆ) ರಾಜ್ಯದ ಕೇಂದ್ರ ಸ್ಥಾನವಾದ ಬೆಂಗಳೂರಿನಲ್ಲಿ ರಾಜ್ಯದ ಎಲ್ಲಾ ಪ್ರಾಥಮಿಕ ಆರೋಗ್ಯ ಕೇಂದ್ರ ಹಾಗೂ ಸರ್ಕಾರಿ ಆಸ್ಪತ್ರೆಗಳಿಗೆ ಬೇಕಾದ ಔಷಧಿಗಳನ್ನು ಖರೀದಿಸುವುದರಿಂದ ಸ್ಥಳೀಯ ಬೇಡಿಕೆಗಳಿಗೆ ಅನುಗುಣವಾಗಿ ವಿತರಿಸದೇ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;